# ಹಳಿಯಾಳ ಎಂಜಿನಿಯರಿಂಗ್ ಕಾಲೇಜಿನಲ್ಲಿ ಅದ್ದೂರಿ ರಾಜ್ಯೋತ್ಸವ ಆಚರಣೆ

**ಹಳಿಯಾಳ:** ಪಟ್ಟಣದ ಕೆಎಲ್‌ಎಸ್‌ವಿಡಿಐಟಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಶನಿವಾರ ೭೦ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಸಡಗರದಿಂದ ನಡೆಯಿತು.

ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ ನಾಡ ಮಾತೆ ಭುವನೇಶ್ವ-ರಿಯ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ, ದೀಪ ಬೆಳಗಿ ಮಾತನಾಡಿ, ಮಾತೃ ಭಾಷೆ ಕನ್ನಡವನ್ನು ಉಳಿಸಿ ಬೆಳೆಸುವ ಗುರುತರ ಜವಾಬ್ದಾರಿ ಪ್ರತಿಯೊಬ್ಬ ಕನ್ನಡಿಗರ ಮೇಲಿದೆ ಎಂದು ಹೇಳಿದರು.



ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ದೈಹಿಕ ಶಿಕ್ಷಣ ನಿರ್ದೇಶಕ ಗದಿಗಪ್ಪ ಎಳ್ಳೂರ್, ಕರ್ನಾಟಕದ ಏಕೀಕರಣದ ವಿವರಣೆ ನೀಡಿದರು. ಕನ್ನಡ ಭಾಷೆಯ ಪ್ರೇಮ ನವೆಂಬರ್ ತಿಂಗಳಿಗಷ್ಟೇ ಸೀಮಿತವಾಗಿರಬಾರದು. ನಿತ್ಯದ ವ್ಯವಹಾರಿಕ ಜೀವನದಲ್ಲಿ ಸಾಧ್ಯವಾದಷ್ಟು ಕನ್ನಡವನ್ನು ಬಳಕೆ ಮಾಡೋಣವೆಂದು ಆಡಳಿತ ವಿಭಾಗದ ಡೀನ್ ಪ್ರೊ. ಮಂಜುನಾಥ ಹೇಳಿದರು. ಈ ಸಂದರ್ಭದಲ್ಲಿ ಪ್ರೊ ಸುಬ್ರಮಣ್ಯ ಹೆಗಡೆ, ಪ್ರೊ ಎಸ್.ಜಿ.ಹಿರೇಮಠ, ಪ್ರೊ ಪ್ರಕಾಶ ಚವಾಣ ಸೇರಿದಂತೆ ಮಹಾವಿದ್ಯಾಲಯದ ಬೋಧಕ, ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.


Powered By KHUSHIHOST ® | License - ePaperCloud.com

# ವಿ ಡಿ ಐ ಟಿ ಯಲ್ಲಿ ಕನ್ನಡ ರಾಜ್ಯೋತ್ಸವ



**»ಜನಮಾಧ್ಯಮ, ಹಳಿಯಾಳ:** ವಿ ಡಿ ಐ ಟಿ ಯಲ್ಲಿ 70ನೇ ಕನ್ನಡ ರಾಜ್ಯೋತ್ಸವವನ್ನು ನ.1ರಂದು ಆಚರಿಸಲಾಯಿತು. ನಾಡ ಮಾತೆ ಭುವನೇಶ್ವರಿಯ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ದೀಪ ಬೆಳಗಿ, ಮಾತೃ ಭಾಷೆ ಕನ್ನಡವನ್ನು ಉಳಿಸಿ, ಬೆಳೆಸುವ ಜವಾಬ್ದಾರಿ ಕನ್ನಡಿಗರ ಮೇಲಿದೆ ಎಂದು ಹೇಳಿದರು. ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ದೈಹಿಕ ಶಿಕ್ಷಣ ನಿರ್ದೇಶಕ ಗದಿಗಪ್ಪ ಎಳ್ಳುರ್ ಕರ್ನಾಟಕದ ಏಕೀಕರಣದ ವಿವರಣೆ ನೀಡಿದರು, ಕನ್ನಡ ಭಾಷೆಯ ಪ್ರೇಮ ನವೆಂಬರ್ ತಿಂಗಳಿಗಷ್ಟೇ ಸೀಮಿತವಾಗಿರದೆ, ನಿತ್ಯದ ವ್ಯವಹಾರಿಕ ಜೀವನದಲ್ಲಿ ಸಾಧ್ಯವಾದಷ್ಟು ಕನ್ನಡವನ್ನು ಬಳಕೆ ಮಾಡೋಣವೆಂದು ಆಡಳಿತ ವಿಭಾಗದ ಡೀನ್ ಪ್ರೊ. ಮಂಜುನಾಥ ಹೇಳಿದರು. ಈ ಸಂದರ್ಭದಲ್ಲಿ ಪ್ರೊ. ಸುಬ್ರಹ್ಮಣ್ಯ ಹೆಗಡೆ, ಪ್ರೊ. ಎಸ್.ಜಿ.ಹಿರೇಮಠ, ಪ್ರೊ. ಪ್ರಕಾಶ ಚೌಹಾಣ ಸೇರಿದಂತೆ ಮಹಾವಿದ್ಯಾಲಯದ ಬೋಧಕ, ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.